2) ರೂ. 189.05 ಲಕ್ಷಗಳು.

3) ಈ ಯೋಜನೆಯನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜಂಟಿ ನೆರವಿನಿಂದ ತೆಗೆದುಕೊಳ್ಳಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಅನುಮೋದನೆ ದೊರೆತ ನಂತರ ರಾಜ್ಯ ಸರ್ಕಾರದ ಅನುಮೋದನೆ ನೀಡಿ ಯೋಜನೆಯನ್ನು ಪ್ರಾರಂಭಿಸಲಾಗುವುದು.

213 (120) : ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ಬೆಂಗಳೂರು ಸುತ್ತಲಿನ 7 ನಗರಸಭೆಗಳಲ್ಲಿ ಅಭಿವೃದ್ಧಿ ಶುಲ್ಕವನ್ನು ಪಡೆಯಲು ಸರ್ಕಾರ ತಡೆ ನೀಡಲು ಕಾರಣವೇನು;

2) ತಡೆ ಹಿಡಿದಿರುವುದರಿಂದ ಕಾಮಗಾರಿಗಳು ಕುಂಠಿತವಾಗಿ ಕುಡಿಯುವ ನೀರು ಮತ್ತು ನೈರ್ಮಲೀಕರಣ ಕಾರ್ಯಗಳಿಗೆ ಹಣವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

3) ಅಭಿವೃದ್ಧಿ ಶುಲ್ಕ ಪಡೆಯಲು ಸರ್ಕಾರದಿಂದ ಯಾವಾಗ ಅನುಮತಿ ನೀಡಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

1) ಕರ್ನಾಟಕ ಪುರಸಭೆ ಕಾಯ್ದೆ 1964 ರಡಿಯಲ್ಲಿ ನಗರಸಭೆ ಅಥವಾ ಪುರಸಭೆಗಳಿಗೆ ಅಭಿವೃದ್ಧಿ ಶುಲ್ಕವನ್ನು ವಿಧಿಸುವ ಅವಕಾಶವಿಲ್ಲದಿರುವುದರಿಂದ ಬೆಂಗಳೂರಿನ 7 ನಗರಸಭೆಗಳಲ್ಲಿ ಸದರಿ ಶುಲ್ಕ ವಸೂಲಿ ಮಡುವುದನ್ನು ನಿಷೇಧಿಸಲಾಗಿದೆ.

2) ಇಲ್ಲ.

3) ಉದ್ಭವಿಸುವುದಿಲ್ಲ.

214 (124) : ಶ್ರೀ ಅಶೋಕ್ ಆರ್. (ಉತ್ತರಹಳ್ಳಿ), ಶ್ರೀ ಪಿ.ಸಿ. ಮೋಹನ್ (ಚಿಕ್ಕಪೇಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಪ್ರತಿದಿನ ಸಂಚರಿಸುವ ವಾಹನಗಳ ಅಂದಾಜು ಸಂಖ್ಯೆ ಎಷ್ಟು;

ಆ) ವಾಹನ ಸಂಚಾರವನ್ನು ಸುಗಮ ಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು

ಇ) ನಗರದಲ್ಲಿ ಏಕಮುಖ ವಾಹನ ಸಂಚಾರದ ವ್ಯವಸ್ಥೆಯನ್ನು ಮಾಡಲಾಗಿರುವ ರಸ್ತೆಗಳಾವುವು;

ಈ) ರಿಚ್ಮಂಡ್ ಸರ್ಕಲ್ ಹಾಗೂ ರೆಸಿಡೆನ್ಸಿ ರಸ್ತೆಗಳಲ್ಲಿ ಏಕಮುಖ ಸಂಚಾರ ವ್ಯವಸ್ಥೆಯಿಂದ ಪ್ರಯಾಣಿಕರಿಂದ ಹಾಗೂ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಊ) ಸದರಿ ಸಂಚಾರದ ವ್ಯವಸ್ಥೆಯಿಂದ ಹೆಚ್ಚು ಅಪಘಾತಗಳಾಗುತ್ತಿದ್ದು, ಇದನ್ನು ತಪ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;